# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ವಿಜಯಪುರ.

**ನೇಮಕಾತಿ ಅಧಿಸೂಚನೆ ಸಂಖ್ಯೆ: 03/2022**
**ದಿನಾಂಕ: 22-06-2022.**

***

**ಆನ್‌ಲೈನ್ ಅರ್ಜಿ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ: 25-06-2022**
**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ: 24.07.2022.**
**ಸಮಯ: ರಾತ್ರಿ 11.59 ಗಂಟೆಯವರೆಗೆ,**

**ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕ: 26-07-2022.**

**ವಿಷಯ: ಬೆರಳಚ್ಚು ನಕಲುಗಾರರ ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.**

**ಉಲ್ಲೇಖ:**
1. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ)(ತಿದ್ದುಪಡಿ)ನಿಯಮಗಳು-1982, 2007 ಹಾಗೂ 2021.
2. ಸರ್ಕಾರಿ ಆದೇಶ ಸಂಖ್ಯೆ:DPAR 08 SRS 95, ದಿನಾಂಕ:20.06.1995.
3. ಸರ್ಕಾರಿ ಆದೇಶ ಸಂಖ್ಯೆ:DPAR 08 SRS 95, ದಿನಾಂಕ:04.01.2008.
4. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 149 ಎಸ್‌ಆರ್ ಆರ್ 2020, ಬೆಂಗಳೂರು, ದಿನಾಂಕ:25.09.2020.
5. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು-2021, ದಿನಾಂಕ:06.07.2021.
6. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಪತ್ರ ಸಂಖ್ಯೆ: ಡಿಜಿಎ-II(LCA-II)-128/2012, ದಿನಾಂಕ 27.01.2022.
7. ಈ ಕಚೇರಿ ಟಿಪ್ಪಣಿ ದಿನಾಂಕ: 02.06.2022 ಹಾಗೂ ಅದರ ಮೇಲಿನ ಆದೇಶ.

***

ಮೇಲ್ಕಂಡ ಉಲ್ಲೇಖದನ್ವಯ ವಿಜಯಪುರ ಜಿಲ್ಲಾ ನ್ಯಾಯಾಂಗ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ ಎರಡು (02) ಬೆರಳಚ್ಚು ನಕಲುಗಾರರ (Typist-Copyist) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

**ಅರ್ಜಿಗಳನ್ನು ವಿಜಯಪುರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/vijayapura-onlinerecruitment ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್ ನಲ್ಲಿ ದಿನಾಂಕ: 25.06.2022 ರಿಂದ 24.07.2022ರ ಮಧ್ಯರಾತ್ರಿ 11.59ರ ವರೆಗೆ ಸಲ್ಲಿಸತಕ್ಕದ್ದು.**

**ಬೆರಳಚ್ಚು ನಕಲುಗಾರರು (Typist-Copyist)** :– ಹುದ್ದೆಗಳ ಸಂಖ್ಯೆ – 02.

**ವೇತನ ಶ್ರೇಣಿ:** 21400–500–22400–550–24600–600–27000–650–29600–750–32600–850–36000–950–39800–1100–42000.

**ಹುದ್ದೆಗಳ ವರ್ಗೀಕರಣಃ**

| ಹುದ್ದೆಗಳ ವರ್ಗೀಕರಣ | ಇತರೆ | ಗ್ರಾಮೀಣ | ಮಹಿಳೆ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗವಿಕಲ | ಮಾಜಿ ಸೈನಿಕ | ತೃತೀಯ ಲಿಂಗ. | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ವರ್ಗ | -- | -- | -- | -- | -- | 01* | -- | -- | **01** |
| ಪ್ರವರ್ಗ-3 ಎ | – | – | 01 | – | -- | -- | -- | -- | **01** |
| **ಒಟ್ಟು** | -- | -- | **01** | -- | -- | **01*** | -- | -- | **02** |

*** ದೃಷ್ಟಿಮಾಂದ್ಯ ಅಭ್ಯರ್ಥಿಗೆ ಮೀಸಲಾಗಿದೆ.**

**ವಿದ್ಯಾರ್ಹತೆಃ** ಅ) ಪದವಿಪೂರ್ವ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹಾಗೂ

ಬ) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಕಿರಿಯ ಶ್ರೇಣಿ (ಜೂನಿಯರ್ ಗ್ರೇಡ್) ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಅಂದರೆ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯವರು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಬಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು. ಅಥವಾ ತತ್ಸಮಾನ ವಿದ್ಯಾರ್ಹತೆ.

**ಆಯ್ಕೆಯ ವಿಧಾನಃ** 1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ–1982, 2007 ಹಾಗೂ 2021ರ ಪ್ರಕಾರ ನೇಮಕಾತಿ ಮಾಡಲಾಗುವುದು.

2) ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು (ಕನ್ನಡ ಮತ್ತು ಆಂಗ್ಲ ಬೆರಳಚ್ಚು ಕನಿಷ್ಠ ತಲಾ 25 ಅಂಕಗಳು) ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ನಿಗದಿಪಡಿಸಿದ ಶೈಕ್ಷಣಿಕ ಪರೀಕ್ಷೆಗಳ ಅಂಕಗಳ ಒಟ್ಟು ಸರಾಸರಿ ಆಧಾರದ ಮೇಲೆ ಮೆರಿಟ್–ವೈಸ 1:5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು.

3) ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡಾವಾರು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿಃ** ಅಭ್ಯರ್ಥಿಗಳು ಕಂಪ್ಯೂಟರನಲ್ಲಿ ಬೆರಳಚ್ಚು ಮಾಡುವ ಜ್ಞಾನವನ್ನು ಹೊಂದಿರಬೇಕು.

**ವಯೊಮಿತಿಃ** ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕೆಳಗೆ ತಿಳಿಸಿರುವಂತೆ ಗರಿಷ್ಠ ವಯೋಮಿತಿಯನ್ನು ಮೀರಬಾರದು.

**ಎ)**ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ ಹಾಗೂ ಪ್ರವರ್ಗ–1ರ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ–40 ವರ್ಷ.

**ಬಿ)**ಪ್ರವರ್ಗ 2–ಎ, 2–ಬಿ, 3–ಎ ಮತ್ತು 3–ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ–38 ವರ್ಷ.

**ಸಿ)**ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷ.

**<u>ವಯೋಮಿತಿ ಸಡಿಲಿಕೆಃ</u>**

1. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.

2. ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಂಬಂಧಿಸಿದ ಪ್ರಾಧಿಕಾರಗಳು ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು. 'ಜೀತ ಕಾರ್ಮಿಕರು' ಅಂದರೆ Bounded Labour System (Abolition) Act-1976 (Central Act 19 of 1976) ಅಥವಾ Karnataka Bounded Labour System (Abolition) Ordinance 1975ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ಧತಿಯಿಂದ ಮುಕ್ತನಾದ ವ್ಯಕ್ತಿ.

3. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್(**NCC**)ನಲ್ಲಿ ಪೂರ್ಣ ಕಾಲಿಕ ಪರೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾದ್ದರೇ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

6. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೇ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದ ವರ್ಷಗಳು.

**<u>ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ಅರ್ಜಿಸಲ್ಲಿಸುವ ವಿಧಾನಃ</u>**

| | |
|---|---|
| ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ: | ರೂ.200/- |
| ಪ್ರವರ್ಗ-2 ಎ, 2 ಬಿ ಮತ್ತು 3 ಎ, 3 ಬಿ, ಗೆ ಸೇರಿದ ಅಭ್ಯರ್ಥಿಗಳಿಗೆ: | ರೂ.100/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ. | |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/vijayapura-onlinerecruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ ಬ್ಯಾಂಕ ಆಫ್ ಇಂಡಿಯಾದ State Bank of India, Collect page ಮೂಲಕ Online payment through net banking/credit, card/debit card/challan download ಸೌಲಭ್ಯದ ಮೂಲಕ ಪಾವತಿ ಮಾಡಬಹುದಾಗಿದೆ.

**ಅಥವಾ**

**ಇ –ಚಲನ್ ನಮೂನೆಯಲ್ಲಿ ಶುಲ್ಕ ಸಂದಾಯಃ** ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ಮೇಲೆ ಅರ್ಜಿಯನ್ನು ಸೂಚಿಸಿದಂತಹ State Bank of India, Collect page ಮೂಲಕ PDF ನಮೂನೆಯಲ್ಲಿ ಇ-ಚಲನ್ ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು ಮತ್ತು ಸ್ಟೇಟ್ ಬ್ಯಾಂಕ ಆಫ್ ಇಂಡಿಯಾದ ಯಾವುದೇ ಶಾಖೆಯ ವ್ಯವಹಾರದ ವೇಳೆಯಲ್ಲಿ ನಿಗದಿಪಡಿಸಿದ ಶುಲ್ಕವನ್ನು, ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಾವತಿ ಮಾಡತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್, ಪೊಸ್ಟಲ ಆರ್ಡರ, ಮನಿ ಆರ್ಡರ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2 ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3 ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

4 ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ X 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
   ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ X 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿಬೇಕು.) ಅಪ್‌ಲೋಡ್ ಮಾಡಬೇಕು.

5 ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7 ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು **ದಿನಾಂಕಃ 24-07-2022 ರ ರಾತ್ರಿ 11.59** ರ ವರೆಗೆ ಅವಕಾಶವಿರುತ್ತದೆ.

8 ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ "ನಿರಾಕ್ಷೇಪಣಾ ಪ್ರಮಾಣಪತ್ರ"ವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳ ಒಳಗೆ ಪಡೆಯತಕ್ಕದ್ದು.

9. ಅಭ್ಯರ್ಥಿಗಳು ತಮ್ಮ ದ್ವಿತೀಯ ಪಿ.ಯು.ಸಿ. ಹಾಗೂ ಬೆರಳಚ್ಚು ಪರೀಕ್ಷೆಯ ಅಂಕಗಳು ಶ್ರೇಣಿಯಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.

10. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಇತರ ಸೂಚನೆಗಳುಃ**

1. ಅಭ್ಯರ್ಥಿಗಳು ಭಾರತೀಯ ನಾಗರೀಕರಾಗಿರತಕ್ಕದ್ದು.
2. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಬಯಸುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.
3. ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ/ವರ್ಗಾವಣೆ ಪ್ರಮಾಣಪತ್ರ/ಬೆರಳಚ್ಚು ಪರೀಕ್ಷೆಯ ಪ್ರಮಾಣಪತ್ರಗಳು) ಜಾತಿ ಪ್ರಮಾಣ ಪತ್ರ, ಗ್ರಾಮೀಣ, ಮಾಜಿ ಸೈನಿಕರು, ಯೋ.ನಿ.ಅ., ಅಂ.ಅ., ಕ.ಮಾ.ಅ. ಸಂಬಂಧಿಸಿದಂತೆ ಮೀಸಲಾತಿ ಕೋರಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ತಪ್ಪೆಂದು ಕಂಡು ಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯನ್ನು ತಿರಸ್ಕರಿಸಲಾಗುವುದು ಹಾಗೂ ಅವರು ತಪ್ಪು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.
4. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ , ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2 ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು ಹಾಗೂ ಕೇಳಿದಾಗ ಸಲ್ಲಿಸಬೇಕು. ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದ ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರ ಅಭ್ಯರ್ಥಿಕೆಯನ್ನು ರದ್ದುಪಡಿಸಲಾಗುವುದು.

5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/96/ಸೇನನಿ/2005, ದಿನಾಂಕ 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

6. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಡೀಕರಣ ಪತ್ರವನ್ನು ಹೊಂದಿರಬೇಕು. ಗ್ರಾಮೀಣ ಅಭ್ಯರ್ಥಿ ಮಿಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವಂತಹ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮೇಲುಸ್ಥರಕ್ಕೆ ಸೇರಿಲ್ಲವೆಂದು ಕರ್ನಾಟಕ ಸರಕಾರವು ನಿಗದಿಪಡಿರುವ ನಮೂನೆಯಲ್ಲಿ ಮತ್ತು ಸಕ್ಷಮ ಪ್ರಾಧಿಕಾರವು ನೀಡಿರುವ ಕೆನೆಪದರ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಹಾಗೂ ಈ ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೇ ಹಾಜರುಪಡಿಸತಕ್ಕದ್ದು.

7. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು.

8. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

9. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/44/ಸೇನನಿ/2001, ದಿನಾಂಕ 27-07-2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂದಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

10. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

11. ಬೆರಳಚ್ಚು- ನಕಲುಗಾರ ಹುದ್ದೆಗಳಿಗೆ ಎಲ್ಲ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ-ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.

12. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನದ ಬಗ್ಗೆ ಮಾಹಿತಿ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

13. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

14. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

15. ಬೆರಳಚ್ಚು-ನಕಲುಗಾರರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಸರ್ಕಾರವು ನಿಗದಿಪಡಿಸಿದ ದಿನಾಂಕದೊಳಗೆ ಸರ್ಕಾರದ ಮಾನ್ಯತೆ ಪಡೆದ ಸಂಸ್ಥೆಯಿಂದ ನಿಯಮಾನುಸಾರ ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

16. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**Sd/-**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ವಿಜಯಪುರ.**

**ಪ್ರತಿಯನ್ನು ಗೌರವಪೂರ್ವಕವಾಗಿ:-** ಮಾನ್ಯ ಮಹಾವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

**ಪ್ರತಿಗಳನ್ನುಃ**

1. ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.
2. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.{ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯದಲ್ಲಿ ವ್ಯಾಪಕ ಪ್ರಸರಣೆಯನ್ನು ಹೊಂದಿರುವ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ (ಒಂದು ಕನ್ನಡ ಹಾಗೂ ಒಂದು ಆಂಗ್ಲ ದಿನಪತ್ರಿಕೆ) ಪ್ರಕಟಿಸಲು ಕೋರಲಾಗಿದೆ}
3. ಉಪನಿರ್ದೇಶಕರು ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ವಿಜಯಪೂರ.
4. ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಸ್ಟೇಶನ ರಸ್ತೆ, ವಿಜಯಪೂರ.
5. ಪ್ರಧಾನ ನಗರ ವ್ಯವಹಾರ ಮತ್ತು ಸೆಷೆನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದಕ್ಷಿಣ ಕನ್ನಡ ಮಂಗಳೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಗುಲ್ಬರ್ಗಾ, ಹಾಸನ, ಹಾವೇರಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
6. ನೋಡಲ್ ಅಧಿಕಾರಿ, ಇ-ಗೆಜೆಟ್, ಜಿಲ್ಲಾ ನ್ಯಾಯಾಲಯ ವಿಜಯಪೂರ. ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಣೆಗಾಗಿ.
7. ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ವಿಜಯಪುರ.
8. ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ವಿಜಯಪುರ.
9. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಮ್. ವಿಜಯಪುರ.
10. ಪ್ರಧಾನ ಸಿವಿಲ್ ನ್ಯಾಯಾಧೀಶರು, ವಿಜಯಪುರ.
11. ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ, ವಿಜಯಪುರ.
12. ಹಿರಿಯ ಸಿವಿಲ್ ನ್ಯಾಯಾಧೀಶರು ಇಂಡಿ/ಸಿಂದಗಿ/ಬಸವನ-ಬಾಗೇವಾಡಿ/ ಮುದ್ದೇಬಿಹಾಳ.
13. ಸಿವಿಲ್ ನ್ಯಾಯಾಧೀಶರು ಇಂಡಿ/ಸಿಂದಗಿ/ಬ.ಬಾಗೇವಾಡಿ/ ಮುದ್ದೇಬಿಹಾಳ.
14. ಈ ನ್ಯಾಯಾಲಯದ ಸೂಚನಾ ಫಲಕಕ್ಕಾಗಿ.

**ನ್ಯಾಯಾಲಯದ ಆದೇಶದ ಮೇರೆಗೆ,**

**Sd/-**

**ಮುಖ್ಯ ಆಡಳಿತಾಧಿಕಾರಿಗಳು,**

**ಜಿಲ್ಲಾ ನ್ಯಾಯಾಲಯ, ವಿಜಯಪುರ.**